ವಾಹನಗಳ ಸಂಚಾರ ದಟ್ಟಣೆ

1221(2330); ಶ್ರೀ ಎಂ. ಕೃಷ್ಣಾರೆಡ್ಡಿ (ಚಿಂತಾಮಣಿ)

ಅ) ಚಿಂತಾಮಣಿಯಲ್ಲಿ ವಾಹನಗಳ ದಟ್ಟಣೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸುಗಮ ಸಂಚಾರಕ್ಕೆ ಕೈಗೊಂಡ ಕ್ರಮಗಳೇನು;

ಇ) ವಾಹನಗಳ ಸಂಚಾರವನ್ನು ನಿಯಂತ್ರಿಸಲು ಟ್ರಾಫೀಕ್ ಪೊಲೀಸ್ ಠಾಣೆಯನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಯಾವ ಕಾಲಮಿತಿಯೊಳಗೆ ಟ್ರಾಫಿಕ್ ಪೊಲೀಸ್ ಠಾಣೆಯನ್ನು ಮಂಜೂರು ಮಾಡಲಾಗುವುದು (ವಿವರ ನೀಡುವುದು)?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ಚಿಂತಾಮಣಿಯಲ್ಲಿ ವಾಹನಗಳ ದಟ್ಟಣೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಕೈಗೊಂಡಿರುವ ಕ್ರಮದ ವರದಿ ಕೆಳಕಂಡಂತಿದೆ.

1) ಚಿಂತಾಮಣಿ ನಗರದಲ್ಲಿ ಸುಗಮ ಸಂಚಾರಕ್ಕಾಗಿ 2014ನೇ ಸಾಲಿನಲ್ಲಿ ಸಂಚಾರ ದಟ್ಟಣೆ ಇರುವ ನಗರದ ರಸ್ತೆಗಳಾದ ಚೇಳೂರು ವೃತ್ತ, ಬೆಂಗಳೂರು ವೃತ್ತ, ಗಜಾನನ ವೃತ್ತ, ಮಿನಿ ವಿಧಾನಸೌಧ ವೃತ್ತ, ಫ್ಲವರ್ ಸರ್ಕಲ್‌ಗಳಲ್ಲಿ ಟ್ರಾಫಿಕ್ ಸಿಗ್ನಲ್ ಲೈಟ್‌ಗಳನ್ನು ಅಳವಡಿಸಲಾಗಿರುತ್ತದೆ.

2) ಶಾಲಾ ಕಾಲೇಜುಗಳ ಬಳಿ ಜೀಬ್ರಾ ಕ್ರಾಸಿಂಗ್ ಅಳವಡಿಸಲಾಗಿರುತ್ತದೆ.

3) ವಾಹನ ನಿಲುಗಡೆ ಸ್ಥಳಗಳನ್ನು ಗುರ್ತಿಸಿ ಸೂಚನಾ ಫಲಕಗಳನ್ನು ಅಳವಡಿಸಲಾಗಿರುತ್ತದೆ.

4) ಸಂಚಾರ ನಿಯಂತ್ರಣ ಕರ್ತವ್ಯಕ್ಕೆ ಸಿಬ್ಬಂದಿಯ ಕೊರತೆ ಇರುವುದರಿಂದ, ಹಾಲಿ ಇರುವ ಸಿಬ್ಬಂದಿಯ ಜೊತೆಗೆ ಗೃಹರಕ್ಷಕ ದಳದ ಸಿಬ್ಬಂದಿಯವರನ್ನು ಬಳಸಿಕೊಂಡು ಸುಗಮ ಸಂಚಾರಕ್ಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿರುತ್ತದೆ.

ಇ) **ಮತ್ತು ಈ**) ಚಿಂತಾಮಣಿ ಸಂಚಾರ ಪೊಲೀಸ್ ಠಾಣೆ ಸೃಜನೆ ಪ್ರಸ್ತಾವನೆಯು ಇಲಾಖೆಯ ಪರಿಶೀಲನೆಯಲ್ಲಿದೆ.

ಅಗ್ನಿಶಾಮಕ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ

1222(2062); ಶ್ರೀ ಕುಮಾರಸ್ವಾಮಿ ಎಚ್.ಕೆ. (ಸಕಲೇಶಪುರ)

ಅ) ರಾಜ್ಯದ ಅಗ್ನಿಶಾಮಕ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರಗಳನ್ನು ನೀಡುವುದು.)

ಇ) ಹಾಸನ ಜಿಲ್ಲೆ ಸಕಲೇಪುರ ಅಗ್ನಿಶಾಮಕ ಠಾಣೆಯ ಕಾರ್ಯಾರಂಭವನ್ನು ಯಾವಾಗ ಮಾಡಲಾಗುವುದು

ಈ) ಹಾಸನ ಜಿಲ್ಲೆ ಆಲೂರು ತಾಲ್ಲೂಕು ಕೇಂದ್ರದಲ್ಲಿ ಅಗ್ನಿಶಾಮಕ ಠಾಣೆ ಮಂಜೂರಾಗಿರುವುದು ನಿಜವೇ ಹಾಗಿದ್ದಲ್ಲಿ ಈ ಠಾಣೆಗೆ ಹುದ್ದೆಗಳನ್ನು ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ